# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ, ಬೆಂಗಳೂರು.

### ಮಾರ್ಚ್ ಮಾಹೆಯ 1ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

************

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21. ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 06-03-2021 ರಂದು ವಾರ್ಡ್ ಸಂಖ್ಯೆ 163, ಕತ್ರಿಗುಪ್ಪೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

*****

ದಿನಾಂಕ: 06-03-2021
ಸ್ಥಳ : ಬಿಬಿಎಂಪಿ ವಿವಿಧೋದ್ದೇಶ ಕಟ್ಟಡ, ಶ್ರೀಕಂಠೇಶ್ವರ ಪಾರ್ಕ್ ಹತ್ತಿರ
ಸಮಯ : ಬೆಳಗ್ಗೆ 11.00 ಗಂಟೆಗೆ

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ದಯಾನಂದ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀಮತಿ ಶ್ವೇತಾ .ಬಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-163, ಕತ್ರಿಗುಪ್ಪೆ |
| 3 | ಶ್ರೀ ಗಂಗಾಧರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 163 |
| 4 | ಶ್ರೀ ವಿಜಯ್ ಕುಮಾರ್ | ಪೋಲೀಸ್ ಇನ್ಸ್‌ಪೆಕ್ಟರ್, ಸಿ.ಕೆ ಅಚ್ಚುಕಟ್ಟು |
| 5 | ಸುರೇಖ | ವೈದ್ಯಾಧಿಕಾರಿ (ವಿದ್ಯಾಪೀಠ ಆಸ್ಪತ್ರೆ ವಾರ್ಡ್-163 |
| 6 | ಉಮೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-163 |
| 7 | ಸುನಿಲ್ ಆರ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-164 ಘನತ್ಯಾಜ್ಯ ನಿರ್ವಹಣೆ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ದಯಾನಂದ್ ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಬೆಸ್ಕಾಂ ರವರು ರಸ್ತೆ ಅಗೆತ ಮಾಡಿ ಕೇಬಲ್ ಅಳವಡಿಸಿದ್ದು, ಸರಿಯಾಗಿ ರಸ್ತೆಗಳನ್ನು ಸರಿಪಡಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ಮತ್ತು ಸಾರ್ವಜನಿಕರು ತಿಳಿಸಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ಸಂಚಾರಿ ವಿಭಾಗ ಪೋಲೀಸ್ ಇನ್ಸ್‌ಪೆಕ್ಟರ್ ರವರು ಸಹ ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸಿ ಅಗೆದಿರುವ ರಸ್ತೆಗಳನ್ನು ಸರಿಪಡಿಸದಿದ್ದಲ್ಲಿ ರಸ್ತೆ ಅಪಘಾತಗಳು ಸಂಭವಿಸುವ ಸಾಧ್ಯತೆ ಇರುತ್ತದೆ ಎಂದು ತಿಳಿಸಿದರು. ಹಾಗೂ ಹೆಚ್ಚುವರಿಯಾಗಿ ಸ್ಥಳದಲ್ಲೇ ಬಿಟ್ಟಿರುವ ಕೇಬಲ್‌ಗಳನ್ನು ತೆರವುಗೊಳಿಸಲು ಸೂಚಿಸಿರುತ್ತಾರೆ. ಅದರಂತೆ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಬೆಸ್ಕಾಂನ ಸಹಾಯಕ ಅಭಿಯಂತರರಿಗೆ ರಸ್ತೆ ಮೇಲ್ಭಾಗದಲ್ಲಿ ಇರುವ ಕೇಬಲ್‌ಗಳನ್ನು ತೆರವುಗೊಳಿಸಿ ರಸ್ತೆಯನ್ನು ವಾಹನ ಸಂಚಾರಕ್ಕೆ ಮತ್ತು ಸಾರ್ವಜನಿಕರ ಓಡಾಟಕ್ಕೆ ಅನುಕೂಲ ಮಾಡಿಕೊಡಲು ಸೂಚಿಸಲಾಯಿತು.

2. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಆರೋಗ್ಯ ವೈದ್ಯಾಧಿಕಾರಿಗಳು ಪ್ರತಿ ದಿನ ಸುಮಾರು 100 ಕೋವಿಡ್-19 ಪರೀಕ್ಷೆಗಳನ್ನು ಮಾಡಿರುತ್ತಾರೆ. ಪಾಸಿಟಿವ್ ಪ್ರಕರಣಗಳು -04 ಪತ್ತೆಯಾಗಿದ್ದು, ಅವುಗಳಿಗೆ ಟ್ರಾವೆಲ್ ಹಿಸ್ಟರಿ ಇರುತ್ತದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.
3. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಹಿರಿಯ ಆರೋಗ್ಯ ಪರಿವೀಕ್ಷಕರು ಪಾದಚಾರಿ ಮಾರ್ಗದಲ್ಲಿ ಅನಧಿಕೃತವಾಗಿ ಇಟ್ಟಿರುವ ತಳ್ಳುವ ಗಾಡಿಗಳು ಮತ್ತು ಅಂಗಡಿಗಳನ್ನು ತೆರವುಗೊಳಿಸಲಾಗಿದೆ ಎಂದು ವಾರ್ಡ್ ಕಮಿಟಿ ಸಭೆಯಲ್ಲಿ ತಿಳಿಸಿರುತ್ತಾರೆ.
4. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಕಿರಿಯ ಆರೋಗ್ಯ ಪರಿವೀಕ್ಷಕರು ಘನತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ಮಾಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.
5. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ಪ್ರತಿ ದಿನ ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ ಕಸ ಸಂಗ್ರಹಣೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಂಡಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.
6. ಕತ್ರಿಗುಪ್ಪೆ ವಾರ್ಡ್-163ರ ಕಂದಾಯ ಪರಿವೀಕ್ಷಕರು ರೂ: 92.00 ಲಕ್ಷಗಳ ಕಂದಾಯ ಬಾಕಿ ಇರುವುದಾಗಿ ತಿಳಿಸಿ ಸದರಿ ಬಾಕಿಯನ್ನು ವಸೂಲಿ ಮಾಡಲು ವಾರ್ಡ್ ಮಟ್ಟದಲ್ಲಿ ಜಾತಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಕಂದಾಯ ವಸೂಲಾತಿ ಮಾಡಲು ಕ್ರಮವಹಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.
7. ಪೋಲೀಸ್ ಅಧಿಕಾರಿಗಳು, ಸಿ.ಕೆ ಅಚ್ಚುಕಟ್ಟು ರವರು ಕತ್ರಿಗುಪ್ಪೆ ಹೆಬ್ಬಾಗಿಲು ಹತ್ತಿರ ಬೀದಿ ದೀಪಗಳು ದುರಸ್ಥಿಯಲ್ಲಿರುತ್ತವೆ ಎಂದು ಹಾಗೂ ಸದರಿ ರಸ್ತೆಯಲ್ಲಿ ಘನತ್ಯಾಜ್ಯ ನಿರ್ವಹಣೆಯ ಬಿ.ಬಿ.ಎಂ.ಪಿ ವಾಹನಗಳನ್ನು ನಿಲ್ಲಿಸಿರುವುದರಿಂದ ಸಾರ್ವಜನಿಕರ ಓಡಾಟಕ್ಕೆ ಮತ್ತು ವಾಹನಗಳ ಸಂಚಾರಕ್ಕೆ ಅಡಚಣೆಯುಂಟಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Swetha B

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
8. ಕಛೇರಿ ಪ್ರತಿ.